ಸ-72-(17)

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ 72ರ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ

**ಸೂಚನೆ:** ಬೆಂಗಳೂರಿನ ದೇವರಚಿಕ್ಕನಹಳ್ಳಿಯ ವಾರ್ಡ್ ನಂ. 188ರಲ್ಲಿ ಭಾರತ ಸರ್ಕಾರದ ಅಧೀನದಲ್ಲಿರುವ ಇಂಡಿಯನ್ ಆಯಿಲ್ ಕಾರ್ಪೋರೇಷನ್‌ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಿ.ಎ. ನಿವೇಶನ 12/1 ಹಂಚಿಕೆಯಾಗಿರುತ್ತದೆ. ಸ್ಥಳೀಯ ಭೂಗಳ್ಳರ ಪರವಾಗಿ ಯಾವುದೇ ಆದೇಶ/ದಾಖಲಾತಿ ಇಲ್ಲದಿದ್ದರೂ ಸಹ ಸ್ಥಳೀಯ ಪೊಲೀಸ್ ಅಧಿಕಾರಿಗಳ ರಕ್ಷಣೆ ಪಡೆದು, ಸರ್ಕಾರಿ ಜಮೀನನ್ನು ಕಬಳಿಸುವ ಸಲುವಾಗಿ ಏಕಾಏಕಿ ದಿನಾಂಕ:23.10.2020 ರಂದು ಭೂಗಳ್ಳರು ದಾಳಿ ನಡೆಸಿ, ಕಾಂಪೌಂಡನ್ನು ಕೆಡವಿ ಸಿ.ಸಿ. ಕ್ಯಾಮರಾಗಳನ್ನು ಹೊಡೆದುಹಾಕಿ, ಅತಿಕ್ರಮಣ ಪ್ರವೇಶ ಮಾಡಿ, ಕಾಮಗಾರಿಗೆ ಅಡ್ಡಿ ಉಂಟುಪಡಿಸಿರುತ್ತಾರೆ. ಈ ಸಂಬಂಧ ಸ್ಥಳೀಯ ಪೊಲೀಸ್ ಅಧಿಕಾರಿಗಳಿಗೆ ದೂರು ನೀಡಿದ್ದರೂ, ಕೇವಲ ಒಬ್ಬರ ಮೇಲೆ ನೆಪಮಾತ್ರಕ್ಕೆ ದೂರನ್ನು ದಾಖಲಿಸುವ ಮೂಲಕ ದೂರನ್ನು ದುರ್ಬಲಗೊಳಿಸುತ್ತಿರುವುದಲ್ಲದೇ, ಅತಿಕ್ರಮಿತ ಪ್ರದೇಶದಲ್ಲಿ ಪೆಟ್ಟಿಗೆ ಅಂಗಡಿಗಳನ್ನು ಅನಧಿಕೃತವಾಗಿ ನಿರ್ಮಿಸಿರುತ್ತಾರೆ. ಪೊಲೀಸರು ಭೂಗಳ್ಳರ ಪರವಾಗಿಯೇ ಕಾರ್ಯನಿರ್ವಹಿಸುತ್ತಿದ್ದಾರೆ ಇದರಿಂದಾಗಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗೆ ನಷ್ಟ ಉಂಟಾಗಿದ್ದು, ಸಾರ್ವಜನಿಕ ಹಿತಾಸಕ್ತಿಯ ಹಿನ್ನೆಲೆಯಲ್ಲಿ ಉಂಟಾಗಿರುವ ಗಂಭೀರ ಸಮಸ್ಯೆಯ ಕುರಿತು.

ಉತ್ತರ: ಮಾನ್ಯ ವಿಧಾನ ಪರಿಷತ್ ಸದಸ್ಯರು ನೀಡಿದ ದೂರಿನಂತೆ ಪೊಲೀಸರು ಭೂಗಳ್ಳರೊಂದಿಗೆ ಶಾಮೀಲಾಗಿ ಅವರಿಗೆ ಸದರಿ ಕಾಂಪೌಂಡನ್ನು ನಾಶಪಡಿಸಿ, ಅವರು ಅತಿಕ್ರಮ ಪ್ರವೇಶ ಮಾಡಲು ಹಾಗೂ ಅವರ ಸ್ವತ್ತನ್ನು ನಷ್ಟವನ್ನುಂಟುಮಾಡಲು ಆರೋಪಿತರ ಪರವಾಗಿ ಕಾರ್ಯ ನಿರ್ವಹಿಸಿರುವುದಿಲ್ಲ. ಪಿರ್ಯಾದುದಾರರು ದಿನಾಂಕ:31.10.2020ರಂದು ನೀಡಿದ ದೂರನ್ನು ಪಡೆದು ಹುಳಿಮಾವು ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ:203/2020 ಕಲಂ 427, 447 ರೆ/ವಿ 34 ಐಪಿಸಿ ರಿತ್ಯಾ ಪ್ರಕರಣ ದಾಖಲಿಸಿಕೊಂಡು ನಿಷ್ಪಕ್ಷಪಾತವಾಗಿ ತನಿಖೆಯನ್ನು ಕೈಗೊಂಡು ಆರೋಪಿಯನ್ನು ದಿನಾಂಕ:03.12.2020ರಂದು ದಸ್ತಗಿರಿ ಮಾಡಿರುತ್ತದೆ. ಈ ಪ್ರಕರಣದಲ್ಲಿ ಕಾನೂನಿನ ಚೌಕಟ್ಟಿನಲ್ಲಿ ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ ಹಾಗೂ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗುತ್ತಿದೆ.

ಸದರಿ ಜಾಗದ ವಿಚಾರವಾಗಿ ಇಂಡಿಯ್ ಆಯಿಲ್ ಕಾರ್ಪೊರೇಶನ್, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಆರೋಪಿತರ ನಡುವೆ ಮಾನ್ಯ ಸಿಸಿಹೆಚ್-44 ನ್ಯಾಯಾಲಯದ ಓ.ಎಸ್.ನಂ.4958/2020ರಲ್ಲಿ ಪ್ರಕರಣ ದಾಖಲಾಗಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:17.10.2020ರಂದು ಸದರಿ ಸ್ವತ್ತಿನಲ್ಲಿ ಯಾವುದೇ ಕಾಮಗಾರಿಯನ್ನು ನಡೆಸಬಾರದೆಂದು ಎದುರುದಾರರಾದ ಇಂಡಿಯ್ ಆಯಿಲ್ ಕಾರ್ಪೊರೇಶನ್ ರವರಿಗೆ ನೋಟೀಸ್ ನೀಡಿದ್ದು, ಮುಂದಿನ ವಿಚಾರಣೆಯು ದಿನಾಂಕ:05.03.2021ಕ್ಕೆ ನಿಗದಿಯಾಗಿರುತ್ತದೆ. ವ್ಯಾಜ್ಯದ ವಿಚಾರದಲ್ಲಿ ಮಾನ್ಯ ನ್ಯಾಯಾಲಯದ ಆದೇಶದಂತೆ ಅಗತ್ಯ ಕ್ರಮಕೈಗೊಳ್ಳಲಾಗುವುದು.

ದೂರುದಾರರು ನೀಡಿದ ದೂರಿನ ಮೇರೆಗೆ ಪ್ರಕರಣವನ್ನು ದಾಖಲಿಸಿ, ನಿಷ್ಪಕ್ಷಪಾತವಾಗಿ ಕಾನೂನು ರೀತ್ಯ ಕ್ರಮ ಕೈಗೊಂಡು, ತನಿಖೆಯನ್ನು ನಡೆಸಿ, ದೋಷಾರೋಪಣಾ ಪಟ್ಟಿ ಸಿದ್ದಪಡಿಸಲಾಗಿದ್ದು, ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

---

**ಹೆಚ್‌ಡಿ 90 ಎಸ್‌ಎಸ್‌ಟಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು.